# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 862 |
| ಸದಸ್ಯರ ಹೆಸರು | : | ಶ್ರೀ ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 19.08.2025 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳನ್ನು ಜನಸಂಖ್ಯೆಗೆ ಅನುಗುಣವಾಗಿ ಪಟ್ಟಣ ಪಂಚಾಯಿತಿಗಳಾಗಿ ಮಾಡಿದೆ; ಬಾಗಲಕೋಟೆ ಜಿಲ್ಲೆಯ ಶಿರೂರು, ಲೋಕಾಪುರ, ವಿಜಯಪುರ ಜಿಲ್ಲೆಯಲ್ಲಿ ಬಬಲೇಶ್ವರ ಮತ್ತು ತಿಕೋಟ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳೆಂದು ಪರಿಗಣಿಸಿ ಘೋಷಣೆ ಮಾಡಲಾಗಿದೆಯೇ; | ಬಾಗಲಕೋಟೆ ಜಿಲ್ಲೆಯ ಶಿರೂರು ಗ್ರಾಮ ಪಂಚಾಯಿತಿಯನ್ನು ದಿನಾಂಕ:22/02/2021ರಂದು ಶಿರೂರು ಪಟ್ಟಣ ಪಂಚಾಯಿತಿಯೆಂದು ಮತ್ತು ಲೋಕಾಪುರ ಗ್ರಾಮ ಪಂಚಾಯಿತಿಯನ್ನು ದಿನಾಂಕ:31/12/2020ರಂದು ಲೋಕಾಪುರ ಪಟ್ಟಣ ಪಂಚಾಯಿತಿಯೆಂದು ಹಾಗೂ ವಿಜಯಪುರ ಜಿಲ್ಲೆಯ ಬಬಲೇಶ್ವರ ಗ್ರಾಮ ಪಂಚಾಯಿತಿಯನ್ನು ದಿನಾಂಕ: 26/03/2021ರಂದು ಬಬಲೇಶ್ವರ ಪಟ್ಟಣ ಪಂಚಾಯಿತಿಯೆಂದು ಮತ್ತು ತಿಕೋಟ ಗ್ರಾಮ ಪಂಚಾಯಿತಿಯನ್ನು ದಿನಾಂಕ:14/08/2020ರಂದು ತಿಕೋಟ ಪಟ್ಟಣ ಪಂಚಾಯಿತಿಯೆಂದು ರಚಿಸಲಾಗಿರುತ್ತದೆ. |
| (ಆ) | ನೂತನವಾಗಿ ಪಟ್ಟಣ ಪಂಚಾಯಿತಿಗಳೆಂದು ಘೋಷಣೆ ಮಾಡಿರುವ ಸಂಸ್ಥೆಗಳಿಗೆ ಕಳೆದ 4 ವರ್ಷಗಳಿಂದ ಚುನಾವಣೆ ನಡೆಸದೇ ಇರುವ ಕಾರಣಕ್ಕೆ ಸ್ಥಳೀಯವಾಗಿ ಜನಪ್ರತಿನಿಧಿಗಳು ಇಲ್ಲದ ಕಾರಣಕ್ಕಾಗಿ ಕೇವಲ ಅಧಿಕಾರಿಗಳ ಮುಖಾಂತರ ಬಂದಿರುವುದರಿಂದ ಅಭಿವೃದ್ಧಿ ಚಟುವಟಿಕೆಗಳು ಕುಂಟಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಸ್ಥೆಗಳಿಗೆ ಚುನಾವಣೆ ನಡೆಸುವುದು ಯಾವಾಗ? (ಮಾಹಿತಿ ಒದಗಿಸುವುದು) | ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 37 ಎಂಎಲ್ಆರ್ 2025; ದಿನಾಂಕ:09/05/2025ರಲ್ಲಿ ಶಿರೂರು ಪಟ್ಟಣ ಪಂಚಾಯಿತಿಗೆ ಕರಡು ವಾರ್ಡ್‌ವಾರು ಮೀಸಲಾತಿಯನ್ನು ಪ್ರಕಟಿಸಿ ಸಾರ್ವಜನಿಕರಿಂದ ಆಕ್ಷೇಪಣೆಯನ್ನು ಆಹ್ವಾನಿಸಲಾಗಿದ್ದು, ಜಿಲ್ಲಾಧಿಕಾರಿ, ಬಾಗಲಕೋಟೆ ರವರಿಂದ ಆಕ್ಷೇಪಣೆ ಕುರಿತು ವರದಿ ಸ್ವೀಕೃತವಾದ ಕೂಡಲೇ ಅಂತಿಮ ವಾರ್ಡ್‌ವಾರು ಮೀಸಲಾತಿಯನ್ನು ಪ್ರಕಟಿಸಲು ಕ್ರಮವಹಿಸಲಾಗುತ್ತದೆ.<br><br>ಲೋಕಾಪುರ ಪಟ್ಟಣ ಪಂಚಾಯಿತಿಗೆ ವಾರ್ಡ್‌ವಾರು ಮೀಸಲಾತಿಯನ್ನು ನಿಗಧಿಪಡಿಸುವ ಸಂಬಂಧ ಜಿಲ್ಲಾಧಿಕಾರಿ, ಬಾಗಲಕೋಟೆ ರವರಿಂದ 2011ರ ಜನಗಣತಿಯನ್ವಯ ವಾರ್ಡ್‌ವಾರು ಕ್ಷೇತ್ರ ಪುನರ್ ವಿಂಗಡಣೆ ಮಾಡಿರುವ ಅಂತಿಮ ಅಧಿಸೂಚನೆಯ ಕರ್ನಾಟಕ ರಾಜ್ಯ ಪತ್ರದ ಪ್ರತಿ ಹಾಗೂ ಜನಸಂಖ್ಯೆ ಮಾಹಿತಿಯು ಸ್ವೀಕೃತವಾಗಿದ್ದು, ಕರಡು ವಾರ್ಡ್‌ವಾರು ಮೀಸಲಾತಿಯನ್ನು ನಿಗಧಿಪಡಿಸಲು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| | | ಬಬಲೇಶ್ವರ ಪಟ್ಟಣ ಪಂಚಾಯಿತಿ ಮತ್ತು ತಿಕೋಟ ಪಟ್ಟಣ ಪಂಚಾಯಿತಿಗಳಿಗೆ ವಾರ್ಡ್‌ವಾರು ಮೀಸಲಾತಿಯನ್ನು ನಿಗಧಿಪಡಿಸುವ ಸಂಬಂಧ 2011ರ ಜನಗಣತಿಯನ್ವಯ ವಾರ್ಡ್‌ವಾರು ಕ್ಷೇತ್ರ ಪುನರ್ ವಿಂಗಡಣೆ ಮಾಡಿರುವ ಅಂತಿಮ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಿರುವ ಪ್ರತಿ ಹಾಗೂ ಜನಸಂಖ್ಯೆ ಮಾಹಿತಿಯನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿ, ವಿಜಯಪುರ ರವರಿಗೆ ಹಲವಾರು ಪತ್ರಗಳನ್ನು ಬರೆಯಲಾಗಿರುತ್ತದೆ ಹಾಗೂ ಜಿಲ್ಲಾಧಿಕಾರಿ, ವಿಜಯಪುರ ರವರೊಂದಿಗೆ ವೀಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿ, ಮಾಹಿತಿಯನ್ನು ಕೂಡಲೇ ಪೌರಾಡಳಿತ ನಿರ್ದೇಶನಾಲಯದ ಮುಖಾಂತರ ಸರ್ಕಾರಕ್ಕೆ ಸಲ್ಲಿಸುವಂತೆ ತಿಳಿಸಲಾಗಿರುತ್ತದೆ. ಜಿಲ್ಲಾಧಿಕಾರಿ, ವಿಜಯಪುರ ರವರಿಂದ ಮಾಹಿತಿ ಸ್ವೀಕೃತವಾದ ಕೂಡಲೇ ವಾರ್ಡ್‌ವಾರು ಮೀಸಲಾತಿಯನ್ನು ನಿಗಧಿಪಡಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.<br><br>ನೂತನವಾಗಿ ರಚಿತವಾಗಿರುವ ಪಟ್ಟಣ ಪಂಚಾಯಿತಿಗಳ ಸುಗಮ ಆಡಳಿತ ಹಿತದೃಷ್ಟಿಯಿಂದ ಕರ್ನಾಟಕ ಪೌರಸಭೆಗಳ ಕಾಯ್ದೆ 1964ರ ಕಲಂ-315 ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಸಂಬಂಧಪಟ್ಟ ತಹಶೀಲ್ದಾರ್‌ಗಳನ್ನು ಆಡಳಿತಾಧಿಕಾರಿಯನ್ನಾಗಿ ನೇಮಕ ಮಾಡಲಾಗಿದೆ. ಆದ್ದರಿಂದ ಕಛೇರಿ ಕೆಲಸಗಳು ಕುಂಠಿತವಾಗಿರುವುದಿಲ್ಲ. |

**ಸಂಖ್ಯೆ:** ನಅಇ 37 ಎಲ್‌ಸಿಕ್ಯೂ 2025

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು